# ಹಿಂಬರಹ

ಸಂಖ್ಯೆ: ಡಿಟಿಇ 01 ಇಎಸ್‌ಟಿ(9) 2016 / 4520    ದಿನಾಂಕ: 08-02-2017

ಕರ್ನಾಟಕ ಸರ್ಕಾರದ ನಡವಳಿಗಳು: ಸರ್ಕಾರದ ಆದೇಶದ ಪತ್ರ ಸಂಖ್ಯೆ: **ಪಿಡಿ**,125,ಎಸ್ **ಪಿಬಿ**,2016, ಬೆಂಗಳೂರು ದಿನಾಂಕ;-09.12.2016ರ ಪ್ರತಿಯನ್ನು ಮಾಹಿತಿಗಾಗಿ ಈ ಕೆಳಕಂಡವರಿಗೆ ಕಳುಹಿಸಿಕೊಡಲಾಗಿದೆ.

1. ಈ ಇಲಾಖೆಯ ಅಧೀನಕ್ಕೊಳಪಡುವ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳು, ಸರ್ಕಾರಿ ಪಾಲಿಟೆಕ್ನಿಕ್, ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳು, ಸ್ಟೆರಿಕ್ ಸಂಸ್ಥೆ, ಬೆಂಗಳೂರು, ಸರ್ಕಾರಿ ಗಣಿ ಶಿಕ್ಷಣ ಶಾಲೆ, ಕೆ.ಜಿ.ಎಫ್, ಚಿತ್ರಕಲಾ ಮಹಾವಿದ್ಯಾಲಯಗಳು ಸಂಸ್ಥೆಗಳ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ [ಇಲಾಖಾ ವೆಬ್‌ಸೈಟ್ ಮುಖಾಂತರ]
2. ಈ ನಿರ್ದೇಶನಾಲಯದ ಎಲ್ಲಾ ಅಧಿಕಾರಿಗಳಿಗೆ, ಜಂಟಿ ನಿರ್ದೇಶಕರು, [ಆಡಳಿತ], ಆಡಳಿತಾಧಿಕಾರಿ, ರಿಜಿಸ್ಟ್ರಾರ್ [ಆಡಳಿತ], ಸಾರ್ವಜನಿಕ ಸಂಪರ್ಕಾಧಿಕಾರಿಗಳಿಗೆ, ಸಹಾಯಕ ಆಡಳಿತಾಧಿಕಾರಿ (1), (2) ಹಾಗೂ (3) ಗಳಿಗೆ ಮಾಹಿತಿಗಾಗಿ.
3. ನಿರ್ದೇಶಕರ ಆಪ್ತ ಶಾಖೆಗೆ
4. ಈ ನಿರ್ದೇಶನಾಲಯದ ಡಿ ವಿ ಪಿ [1] ವಿಭಾಗಕ್ಕೆ ಮಾಹಿತಿಗಾಗಿ
5. ಈ ನಿರ್ದೇಶನಾಲಯದ ಇ-ಆಡಳಿತ ವಿಭಾಗಕ್ಕೆ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ.

**ಆಡಳಿತಾಧಿಕಾರಿ**

Sh-est(9) Endsmnt

147

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:-ಪ್ರಾದೇಶಿಕ ಅಸಮತೋಲನ ನಿವಾರಣಾ ಉನ್ನತಾಧಿಕಾರದ ಸಮಿತಿಯ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ಉನ್ನತಾಧಿಕಾರಿ ಸಮಿತಿಯ ಅಧ್ಯಕ್ಷರ ನೇಮಕಾತಿ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ:ಪಿಡಿ 104 ಎಸ್ ಪಿಬಿ 2016 ಬೆಂಗಳೂರು, ದಿನಾಂಕ:17.09.2016.
2. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಆಸುಇ (ರಾಜ್ಯ ಶಿಷ್ಟಾಚಾರ), ಇವರ ಅಧಿಸೂಚನೆ ಸಂಖ್ಯೆ: ಸಿಆಸುಇ 217 ಶಿಸನೇ 2016, ಬೆಂಗಳೂರು, ದಿನಾಂಕ:02.11.2016.

ಪ್ರಸ್ತಾವನೆ:

ಪ್ರಾದೇಶಿಕ ಅಸಮತೋಲನೆಯನ್ನು ನಿವಾರಿಸಲು ಡಾ:ಡಿ.ಎಂ. ನಂಜುಂಡಪ್ಪನವರ ಅಧ್ಯಕ್ಷತೆಯಲ್ಲಿ ಉನ್ನತಾಧಿಕಾರಿ ಸಮಿತಿಯನ್ನು ಅಕ್ಟೋಬರ್ 2000 ರಲ್ಲಿ ರಚಿಸಲಾಗಿತ್ತು. ಈ ಸಮಿತಿಯು ರಾಜ್ಯದಲ್ಲಿದ್ದ ಪ್ರಾದೇಶಿಕ ಅಸಮತೋಲನೆಯನ್ನು ಅಧ್ಯಯನ ಮಾಡಿ ಸರ್ಕಾರಕ್ಕೆ ಸೂಕ್ತ ಸಲಹೆಗಳನ್ನು ನೀಡುವುದರ ಮೂಲಕ ಅಂತರಜಿಲ್ಲೆ ಹಾಗೂ ಅಂತರಪ್ರಾಂತೀಯ ಅಸಮತೋಲನೆಯನ್ನು ಕಡಿಮೆ ಮಾಡುವುದಲ್ಲದೆ, ಸಮತೋಲನ ಅಭಿವೃದ್ದಿಗಾಗಿ ಯೋಜನೆಗಳನ್ನು ಅನುಷ್ಠಾನಗೊಳಿಸಲು ಸೂತ್ರವನ್ನು ಶಿಫಾರಸ್ಸು ಮಾಡಿ ಅಂತಿಮ ವರದಿಯನ್ನು ಜೂನ್ 2002ರಲ್ಲಿ ಸಲ್ಲಿಸಿದೆ. ಈ ವರದಿಯು 114 ತಾಲ್ಲೂಕುಗಳನ್ನು ಅತ್ಯಂತ ಹಿಂದುಳಿದವು, ಅತೀ ಹಿಂದುಳಿದವು ಮತ್ತು ಹಿಂದುಳಿದವು ಎಂದು ವರ್ಗೀಕರಿಸಿದ್ದು, ಇವುಗಳ ಅಭಿವೃದ್ದಿಗಾಗಿ ಸರ್ಕಾರವು ವಿಶೇಷ ಅಭಿವೃದ್ಧಿ ಯೋಜನೆಯನ್ನು ಅನುಷ್ಠಾನಿಸುತ್ತಿದೆ.

ಪ್ರಾದೇಶಿಕ ಅಸಮತೋಲನೆಯನ್ನು ನಿವಾರಿಸಲು ರಚಿಸಲಾಗಿದ್ದ ಉನ್ನತ ಮಟ್ಟದ ಸಮಿತಿಯು ಮಾಡಿರುವ ಶಿಫಾರಸ್ಸುಗಳಲ್ಲಿ ಅನುಷ್ಠಾನ ಮಾಡಲಾದ ಶಿಫಾರಸ್ಸುಗಳನ್ನು ಪರಿಶೀಲಿಸಿ ಇನ್ನೂ ಅನುಷ್ಠಾನ ಗೊಳಿಸಬೇಕಾದ ಶಿಫಾರಸ್ಸುಗಳ ಬಗ್ಗೆ ಕ್ರಮ ವಹಿಸಬೇಕಾಗಿರುತ್ತದೆ. 2007-08ರ ಆಯವ್ಯಯದಲ್ಲಿ ಘೋಷಿಸಲಾದ ಎಂಟು ವರ್ಷಗಳ ವಿಶೇಷ ಅಭಿವೃದ್ಧಿ ಯೋಜನೆಯನ್ನು (2007-08 ರಿಂದ 2014-15ರವರೆಗೆ) ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅವಶ್ಯಕವೆನಿಸಿದ ಸಲಹೆಗಳನ್ನು ನೀಡಬೇಕಾಗಿರುತ್ತದೆ. ಈವರೆಗಿನ ವಿಶೇಷ ಅಭಿವೃದ್ಧಿ ಯೋಜನೆಯ ಅನುಷ್ಠಾನದ ಪರಿಣಾಮ ಮತ್ತು ಫಲದ ಬಗ್ಗೆ ಪರಿಶೀಲಿಸಿ ಸಲಹೆ ಸೂಚನೆಗಳನ್ನು ನೀಡಬೇಕಾಗಿರುವುದರಿಂದ ಕ್ರಮಸಂಖ್ಯೆ(1)ರಲ್ಲಿ ಓದಲಾದ ಆದೇಶದಲ್ಲಿ ಶ್ರೀ. ಎಂ.ಆರ್. ಸೀತಾರಾಮ್, ಯೋಜನೆ, ಸಾಂಖ್ಯಿಕ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು, ಇವರನ್ನು "ಡಾ:ಡಿ.ಎಂ.ನಂಜುಂಡಪ್ಪನವರ ಅಧ್ಯಕ್ಷತೆಯಲ್ಲಿ ರಚಿಸಲಾದ ಸಮಿತಿಯ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ರಚಿಸಲಾಗಿರುವ ಉನ್ನತಾಧಿಕಾರಿ ಸಮಿತಿಯ" ಅಧ್ಯಕ್ಷರನ್ನಾಗಿ ದಿನಾಂಕ:-25.08.2016ರಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಕ ಮಾಡಲಾಗಿತ್ತು .

.....2

16/12/16

C.no - 21197

NIL / 21243

28/11/16

25/11/2016

ಕ್ರಮಸಂಖ್ಯೆ (2) ರಲ್ಲಿ ಓದಲಾದ ಅಧಿಸೂಚನೆಯಲ್ಲಿ ಶ್ರೀ. ಎನ್.ವೈ. ಗೋಪಾಲಕೃಷ್ಣ, ಮಾನ್ಯ ವಿಧಾನ ಸಭಾ ಸದಸ್ಯರು, ರಾಂಪುರ ಅಂಚೆ, ಮಾಳಕಾಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಅಧ್ಯಕ್ಷರನ್ನಾಗಿ ನೇಮಿಸಲು ಸರ್ಕಾರವು ತೀರ್ಮಾನಿಸಿರುತ್ತದೆ.

ಈ ಬಗ್ಗೆ ಪರಿಶೀಲಿಸಿ ಕೆಳಕಂಡಂತೆ ಆದೇಶ ಹೊರಡಿಸಿದೆ.

<u>ಸರ್ಕಾರಿ ಆದೇಶ ಸಂಖ್ಯೆ: ಪಿಡಿ 125 ಎಸ್‌ಪಿಐ 2016, ಬೆಂಗಳೂರು, ದಿನಾಂಕ: 9ನೇ ನವೆಂಬರ್ 2016.</u>

ಶ್ರೀ. ಎನ್.ವೈ. ಗೋಪಾಲಕೃಷ್ಣ, ಮಾನ್ಯ ವಿಧಾನ ಸಭಾ ಸದಸ್ಯರು, ರಾಂಪುರ ಅಂಚೆ, ಮಾಳಕಾಲ್ಮೂರು ತಾಲ್ಲೂಕು, ಚಿತ್ರದುರ್ಗ ಜಿಲ್ಲೆ ಇವರನ್ನು "ಡಾ:ಡಿ.ಎಂ.ನಂಜುಂಡಪ್ಪನವರ ಅಧ್ಯಕ್ಷತೆಯಲ್ಲಿ ರಚಿಸಲಾದ ಸಮಿತಿಯ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸಲು ರಚಿಸಲಾಗಿರುವ ಉನ್ನತಾಧಿಕಾರಿ ಸಮಿತಿಯ" ಅಧ್ಯಕ್ಷರನ್ನಾಗಿ ನೇಮಿಸಿ ಹಾಗೂ ಇವರಿಗೆ ಸಂಪುಟ ದರ್ಜೆ ಸಚಿವರ ಸ್ಥಾನಮಾನವನ್ನು ನೀಡಿ ತಕ್ಷಣದಿಂದ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ನೇಮಕ ಮಾಡಲಾಗಿದೆ.

2. ಈ ಕೆಳಕಂಡ ಅಧಿಕಾರಿಗಳು ಈ ಸಮಿತಿಯ ಸದಸ್ಯರಿರುತ್ತಾರೆ.

| | |
|---|---|
| 1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು | ಸದಸ್ಯರು |
| 2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ | ಸದಸ್ಯರು |
| 3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ | ಸದಸ್ಯರು |
| 4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ | ಸದಸ್ಯರು |
| 5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ | ಸದಸ್ಯರು |
| 6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮೂಲಭೂತ ಸೌಕರ್ಯಗಳ ಅಭಿವೃದ್ಧಿ ಇಲಾಖೆ. | ಸದಸ್ಯರು |
| 7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ | ಸದಸ್ಯರು |

3. ಸದರಿ ಉನ್ನತಾಧಿಕಾರಿ ಸಮಿತಿಯ ಪರಿಶೀಲನಾಂಶಗಳು (Terms of reference) ಕೆಳಕಂಡಂತಿವೆ.

ಎ. ಪ್ರಾದೇಶಿಕ ಅಸಮತೋಲನೆಯನ್ನು ನಿವಾರಿಸಲು ರಚಿಸಲಾಗಿದ್ದ ಉನ್ನತ ಮಟ್ಟದ ಸಮಿತಿಯು ಮಾಡಿರುವ ಶಿಫಾರಸ್ಸುಗಳ ಅನುಷ್ಠಾನದ ವಸ್ತುಸ್ಥಿತಿಯನ್ನು ಪರಿವೀಕ್ಷಿಸಿ, ಇನ್ನೂ ಅನುಷ್ಠಾನಗೊಳಿಸಬೇಕಾದ ಶಿಫಾರಸ್ಸುಗಳ ಬಗ್ಗೆ ಕ್ರಮ ವಹಿಸಲು ಸೂಕ್ತ ಸಲಹೆಗಳನ್ನು ನೀಡುವುದು.

ಬಿ. 2007-08ರ ಆಯವ್ಯಯದಲ್ಲಿ ಘೋಷಿಸಲಾದ ಎಂಟು ವರ್ಷಗಳ ವಿಶೇಷ ಅಭಿವೃದ್ಧಿ ಯೋಜನೆಯ (2007-08 ರಿಂದ 2014-15ರವರೆಗೆ) ಅನುಷ್ಠಾನವನ್ನು ಪರಿವೀಕ್ಷಿಸುವುದು ಹಾಗೂ ಇನ್ನುಳಿದ ಆರ್ಥಿಕ ವರ್ಷಗಳಲ್ಲಿ ಈ ಯೋಜನೆಯನ್ನು ಪರಿಣಾಮಕಾರಿ

.....3

ಯಾಗಿ ಅನುಷ್ಠಾನಗೊಳಿಸಲು ಅವಶ್ಯಕವೆನಿಸಿದ ಶಿಫಾರಸ್ಸುಗಳನ್ನು ನೀಡುವುದು.

ಸಿ. ಪ್ರಾದೇಶಿಕ ಅಸಮತೋಲನೆಯನ್ನು ನಿವಾರಿಸಲು ಮಾಡಿರುವ ಶಿಫಾರಸ್ಸುಗಳ ಅನುಷ್ಠಾನಕ್ಕೆ (ವಿಶೇಷ ಅಭಿವೃದ್ಧಿ ಯೋಜನೆ ಒಳಗೊಂಡಂತೆ) ಹೂಡಿರುವ ಬಂಡವಾಳದಿಂದ ಹೊರಹೊಮ್ಮುವ ಪರಿಣಾಮ ಮತ್ತು ಫಲದ ಬಗ್ಗೆ ಒಂದು ಮೌಲ್ಯಮಾಪನವನ್ನು ನಡೆಸಲಾಗುತ್ತಿದ್ದು ಈ ವರದಿಯ ಶಿಫಾರಸ್ಸುಗಳ ಆಧಾರದ ಮೇಲೆ ವಿಶೇಷ ಅಭಿವೃದ್ಧಿ ಯೋಜನೆಯ ಅನುಷ್ಠಾನದಲ್ಲಿ ಅವಶ್ಯವಾದ ಸಲಹೆ ಸೂಚನೆಗಳನ್ನು ನೀಡುವುದು.

ಡಿ. ಈ ಸಮಿತಿಯು ಪ್ರತಿ ಮೂರು ತಿಂಗಳಿಗೊಮ್ಮೆ ಸಭೆ ಸೇರುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್. ಪಾರ್ವತಿ)
ಸರ್ಕಾರದ ಅಧೀನ ಕಾರ್ಯದರ್ಶಿ ಎಸ್-3(ಪ್ರ)
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.
080-22032623.

ಇವರಿಗೆ:

1. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಇವರಿಗೆ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಹಾಗೂ 25 ಪ್ರತಿಗಳನ್ನು ಕಳುಹಿಸಲು ಕೋರಿದೆ.

ಪ್ರತಿ:

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
4. ಮಾನ್ಯ ಮುಖ್ಯ ಮಂತ್ರಿಯವರ ಪ್ರಧಾನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಮೂಲಸೌಕರ್ಯ ಅಭಿವೃದ್ಧಿ ಇಲಾಖೆ.
9. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ.
10. ಸರ್ಕಾರದ ಎಲ್ಲಾ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು.
11. ನಿವಾಸಿ ಆಯುಕ್ತರು, ಕರ್ನಾಟಕ ಭವನ, ನವದೆಹಲಿ.
12. ಪ್ರಾದೇಶಿಕ ಆಯುಕ್ತರು, ಬೆಂಗಳೂರು/ಕಲಬುರಗಿ/ಮೈಸೂರು/ಬೆಳಗಾಂ.
13. ಮಾನ್ಯ ಯೋಜನೆ,ಸಾಂಖ್ಯಿಕ. ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

½ು



14. ಎಲ್ಲಾ ಜಿಲ್ಲಾಧಿಕಾರಿಗಳು.
15. ಜಿಲ್ಲಾ ಪಂಚಾಯತಿಯ ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
16. ಸರ್ಕಾರದ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆಯವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
17. ಮಾನ್ಯ ಮುಖ್ಯಮಂತ್ರಿಯವರ ಅಧೀನ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
18. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
19. ವಾರದ ರಾಜ್ಯಪತ್ರ/ ಶಾಖಾ ರಕ್ಷಾಕಡತ/ಹೆಚ್ಚುವರಿ ಪ್ರತಿ.